ತೀರ್ಥಹಳ್ಳಿ ತಾಲ್ಲೂಕಿನ ಕೋಣಂದೂರು ಗ್ರಾಮಕ್ಕೆ ಆರಕ್ಷಕ ಠಾಣೆ ಮಂಜೂರು.

340 (169) ಶ್ರೀ ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ):- ಮಾನ್ಯ ಗೃಹ ಮತ್ತು ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿ ತಾಲ್ಲೂಕಿನ ಕೋಣಂದೂರು ಗ್ರಾಮಕ್ಕೆ ಆರಕ್ಷಕ ಠಾಣೆ ಮಂಜೂರು ಮಾಡಲು ಸರ್ಕಾರ ಈ ಹಿಂದೆಯೇ ನಿರ್ಧಾರ ಮಾಡಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಇಲ್ಲಿಯವರೆಗೂ ಪ್ರಾರಂಭಿಸದೇ ವಿಳಂಬ ಮಾಡುತ್ತಿರಲು ಕಾರಣವೇನು?

ಇ) ಈ ವಿಳಂಬ ನೀತಿಯಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ?

ಈ) ಬಂದಿದ್ದರೆ, ಇಲ್ಲಿಯವರೆಗೂ ಕ್ರಮ ಕೈಗೊಳ್ಳದೇ ಇರಲು ಕಾರಣವೇನು?

ಉ) ಈಗಲಾದರೂ ಈ ಗ್ರಾಮದಲ್ಲಿ ಆರಕ್ಷಕ ಠಾಣೆ ತೆರೆಯಲಾಗುವುದೇ?

ಶ್ರೀ ಧರ್ಮಸಿಂಗ್ (ಗೃಹ ಮತ್ತು ಅಬಕಾರಿ ಸಚಿವರು):-

ಅ) ಹೌದು

ಆ) ಸದ್ಯದಲ್ಲೇ ಪ್ರಾರಂಭಿಸಲಾಗುವುದು

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಉ) ಉದ್ಭವಿಸುವುದಿಲ್ಲ

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ಪಡೆಯಲು ಬಂದ ಅರ್ಜಿಗಳು ಹಾಗೂ ಠೇವಣಿ.

342 (175) ಶ್ರೀ ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ):- ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನವನ್ನು ಪಡೆಯಲು ಒಟ್ಟು ಎಷ್ಟು ಅರ್ಜಿಗಳು ಬಂದಿವೆ ಹಾಗೂ ಈ ಅರ್ಜಿಗಳ ಜೊತೆಗೆ ಸಲ್ಲಿಸಿರುವ ಠೇವಣಿ ಎಷ್ಟು?

ಆ) ನಿವೇಶನಕ್ಕಾಗಿ ಅರ್ಜಿಯನ್ನು ಸಲ್ಲಿಸಿದವರಿಗೆ ಎಂದು ನಿವೇಶನವನ್ನು ವಿತರಣೆ ಮಾಡಲಾಗುವುದು ಹಾಗೂ ಠೇವಣಿಯ ರೂಪದಲ್ಲಿ ಕಟ್ಟಿರುವ ಹಣಕ್ಕೆ ಬಡ್ಡಿ ನೀಡಲಾಗುವುದೇ?

ಇ) ನಿವೇಶನಕ್ಕಾಗಿ ಕಾಯುತ್ತಿರುವ ಅರ್ಜಿದಾರರಿಗೆ ನಿವೇಶನವನ್ನು ಒದಗಿಸಲು ಕಾಲ ಮಿತಿಯ ಕಾರ್ಯಕ್ರಮವನ್ನು ಹಮ್ಮಿಕೊಂಡು ನಿವೇಶನವನ್ನು ವಿತರಣೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಇಲ್ಲದಿದ್ದಲ್ಲಿ ಅರ್ಜಿಯ ಜೊತೆಗೆ ಸಲ್ಲಿಸಿರುವ ಠೇವಣಿ ಹಣವನ್ನು ಹಿಂತಿರುಗಿಸುವ ಆಲೋಚನೆ ಸರ್ಕಾರದ ಮುಂದಿದೆಯೇ?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು):-

ಅ) 86,988

27.54ಕೋಟಿ ರೂಗಳು.